# ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ,
# ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತ,
ಮತ್ತು
# ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ.

**(ಕರ್ನಾಟಕ ಸರ್ಕಾರದ ಉದ್ಯಮಗಳು)**

**ದೇವರಾಜ ಅರಸು ಭವನ, 4ನೇ ಮಹಡಿ, ನಂ 16ಡಿ, ಮಿಲ್ಲರ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು– 52**

ಸಂಖ್ಯೆ: ದೇಹಿನಿ/ಸ/ಅಅ/ಸಿಆರ್–03/2018–19 ದಿನಾಂಕ:03/07/2018

## ಪ್ರಕಟಣೆ

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ದಿನಾಂಕ:25/06/2018ರಂದು ಅರ್ಜಿಗಳನ್ನು ಅಹ್ವಾನಿಸಿ ನೀಡಿದ ದಿನಾಂಕ:28/06/2018ರ ಪತ್ರಿಕಾ ಪ್ರಕಟಣೆಯನ್ನು ಮಾರ್ಪಡಿಸಿ ಮತ್ತೊಮ್ಮೆ ಪ್ರಕಟಣೆ ಹೊರಡಿಸಿದೆ.

ಉಪ್ಪಾರ ಮತ್ತು ಅಂಬಿಗ ಅದರ ಉಪಜಾತಿಯವರು ಸೇರಿದಂತೆ ಎಲ್ಲಾ ಹಿಂದುಳಿದ ವರ್ಗಗಳ ಜನರು (ವಿಶ್ವಕರ್ಮ ಅದರ ಉಪ ಜಾತಿಗಳು ಮತ್ತು ಮತೀಯ ಅಲ್ಪಸಂಖ್ಯಾತರನ್ನು ಹೊರತುಪಡಿಸಿ) ಆರ್ಥಿಕ ಅಭಿವೃದ್ಧಿಗಾಗಿ 2018–19ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ಕೆಳಕಂಡ ಯೋಜನೆಗಳಲ್ಲಿ ಸೌಲಭ್ಯ ಪಡೆಯ ಬಯಸುವವರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. **ನಿಗದಿತ ಅರ್ಜಿ ನಮೂನೆಗಳನ್ನು ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿಯಲ್ಲಿ ಅಥವಾ ಆಯಾ ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿಸ್ತರಣಾಧಿಕಾರಿಗಳಿಂದ ಪಡೆದು, ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಸಲ್ಲಿಸಲು ಕೊನೆಯ ದಿನಾಂಕ:18/08/2018.**

ಒಂದು ಬಾರಿ ನಿಗಮದ ಯಾವುದಾದರು ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**ನಿಗಮದ ಯೋಜನೆಗಳಲ್ಲಿ ಸೌಲಭ್ಯ ಪಡೆಯಲು ಹೊಂದಿರಬೇಕಾದ ಸಾಮಾನ್ಯ ಅರ್ಹತೆಗಳು.**(1) ಅರ್ಜಿದಾರರು ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 3ಎ ಮತ್ತು 3ಬಿಗೆ ಸೇರಿದವರಾಗಿರಬೇಕು.(ವಿಶ್ವಕರ್ಮ ಅದರ ಉಪ ಜಾತಿ ಮತ್ತು ಮತೀಯ ಅಲ್ಪಸಂಖ್ಯಾತರನ್ನು ಹೊರತುಪಡಿಸಿ) (2)ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.40,000/–ಗಳು ಪಟ್ಟಣ ಪ್ರದೇಶದವರಿಗೆ ರೂ.55,000/–ಗಳ ಒಳಗಿರಬೇಕು. (3) ಅರ್ಜಿದಾರರ ವಯಸ್ಸು 18 ರಿಂದ 55 ವರ್ಷಗಳ ಮಿತಿಯಲ್ಲಿರಬೇಕು. (4)ಅರ್ಜಿದಾರರು ಕೆ.ವೈ.ಸಿ. ಬಗ್ಗೆ ಆಧಾರ್ ಕಾರ್ಡ್/ಚುನವಣಾ ಗುರುತಿನ ಚೀಟಿ/ಪಾನ್ ಕಾರ್ಡ್ ದಾಖಲೆಗಳನ್ನು ಕಡ್ಡಾಯವಾಗಿ ಅರ್ಜಿಯೊಂದಿಗೆ ಸಲ್ಲಿಸಬೇಕು. (ಅರ್ಜಿದಾರರು ಐ.ಎಫ್.ಎಸ್.ಸಿ. ಕೋಡ್ ಹೊಂದಿರುವ ರಾಷ್ಟ್ರೀಕೃತ/ಗ್ರಾಮೀಣ ಬ್ಯಾಂಕ್‌ಗಳಲ್ಲಿ ಖಾತೆ ಹೊಂದಿರಬೇಕು.

**ರಾಜ್ಯ ಸರ್ಕಾರದ ಯೋಜನೆಗಳು:**

1. **ಚೈತನ್ಯ ಸಹಾಯಧನ ಯೋಜನೆ:** ರಾಷ್ಟ್ರೀಕೃತ ಬ್ಯಾಂಕ್‌ಗಳ ಸಹಯೋಗದೊಂದಿಗೆ ಹಿಂದುಳಿದ ವರ್ಗಗಳ ಜನರಿಗೆ ವಿವಿಧ ಆರ್ಥಿಕ ಚಟುವಟಿಕೆ ಕೈಗೊಳ್ಳಲು ನಿಗಮದ ಹಾಗೂ ಬ್ಯಾಂಕ್ ಪಾಲಿನ ಮೊತ್ತ ಸೇರಿ ಗರಿಷ್ಠ ರೂ.5.00ಲಕ್ಷಗಳವರೆಗೆ ಸೌಲಭ್ಯ.
2. **ಡಿ.ದೇವರಾಜ ಅರಸು ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ:–** ಹಿಂದುಳಿದ ವರ್ಗಗಳ ಜನರು ಸ್ವಯಂ ಉದ್ಯೋಗಕ್ಕೆ ಆರ್ಥಿಕ ಚಟುವಟಿಕೆ ಕೈಗೊಳ್ಳಲು ಚಟುವಟಿಕೆ ಅನುಸಾರ ಗರಿಷ್ಠ ರೂ.2,00,000/– ಗಳ ವರೆಗೆ ಆರ್ಥಿಕ ನೆರವು. ಇದರಲ್ಲಿ, ಗರಿಷ್ಠ ಶೇ.15ರಷ್ಟು ಸಹಾಯಧನ, ಉಳಿಕೆ ಮೊತ್ತ ವಾರ್ಷಿಕ ಶೇ4ರ ಬಡ್ಡಿದರದಲ್ಲಿ ಸಾಲ.
3. **ಕಿರುಸಾಲ ಯೋಜನೆಯಲ್ಲಿ ಸೌಲಭ್ಯ:–** ಸ್ವ ಸಹಾಯ ಗುಂಪುಗಳ ಸದಸ್ಯರು ಕೈಗೊಳ್ಳುವ ಸಣ್ಣ ಮತ್ತು ಅತಿ ಸಣ್ಣ ವ್ಯಾಪಾರದ ಚಟುವಟಿಕೆಗಳಿಗೆ ಅಂದರೆ, ಹಣ್ಣು, ತರಕಾರಿ ಮಾರುವವರು, ಹಾಲು ಮಾರುವವರು, ಹೂ ಮಾರುವವರು, ತಳ್ಳುವ ಗಾಡಿ ವ್ಯಾಪಾರಿಗಳು ಮುಂತಾದ ಸಣ್ಣ ಪ್ರಮಾಣದ ವ್ಯಾಪಾರ ಚಟುವಟಿಕೆಗಳಿಗೆ ವಾರ್ಷಿಕ ಶೇಕಡ 4ರ ಬಡ್ಡಿ ದರದಲ್ಲಿ ಗರಿಷ್ಠ ರೂ.10,000/– ಸಾಲ ಹಾಗೂ ರೂ.5,000/–ಗಳ ಸಹಾಯಧನ. ಅರ್ಜಿದಾರರು ಬಿ.ಪಿ.ಎಲ್ ಕುಟುಂಬಕ್ಕೆ ಸೇರಿರಬೇಕು ಹಾಗೂ ಸರ್ಕಾರಿ/ಅರೆ ಸರ್ಕಾರಿ ಉದ್ಯೋಗದಲ್ಲಿ ಇರಬಾರದು.
4. **ಸಾಂಪ್ರದಾಯಿಕ ಕುಶಲಕರ್ಮಿಗಳು ಮತ್ತು ವೃತ್ತಿ ಕಸುಬುದಾರರಿಗೆ ಸಾಲ ಮತ್ತು ಸಹಾಯಧನ:–** ಹಿಂದುಳಿದ ವರ್ಗಗಳ ಸಾಂಪ್ರದಾಯಿಕ ವೃತ್ತಿದಾರರು ಅಥವಾ ವೃತ್ತಿ ಕಸುಬುದಾರರು ತಮ್ಮ ವೃತ್ತಿಯ ಅಭಿವೃದ್ಧಿಗಾಗಿ, ಆಧುನಿಕ ಉಪಕರಣಗಳನ್ನು ಖರೀದಿಸಲು, ತಾಂತ್ರಿಕತೆಯನ್ನು ಮೇಲ್ದರ್ಜೆಗೇರಿಸಲು, ವೃತ್ತಿ ಅನುಸಾರ ಗರಿಷ್ಠ ರೂ.2,00,000/–ಗಳ ವರೆಗೆ ಆರ್ಥಿಕ ನೆರವು. ಇದರಲ್ಲಿ, ಗರಿಷ್ಠ ಶೇ.15ರಷ್ಟು ಸಹಾಯಧನ, ಉಳಿಕೆ ಮೊತ್ತ ಶೇ.2ರ ಬಡ್ಡಿದರದಲ್ಲಿ ಸಾಲ.

5. **ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಪ್ರವೇಶ ಪಡೆದಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಬಡ್ಡಿರಹಿತ ಸಾಲ ಯೋಜನೆ:–**

- ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣಗಳಾದ ಪೋಸ್ಟ್‌ಡಾಕ್ಟರಲ್, ಪಿಹೆಚ್.ಡಿ., ಮಾಸ್ಟರ್ ಡಿಗ್ರಿ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡಲು ವಾರ್ಷಿಕ ರೂ.3.50ಲಕ್ಷಗಳಂತೆ, 03 ವರ್ಷಗಳ ಕೋರ್ಸ್‌ನ ಅವಧಿಗೆ, ಗರಿಷ್ಠ ರೂ.10.00ಲಕ್ಷಗಳ ಬಡ್ಡಿರಹಿತ ಸಾಲ ಮಂಜೂರು.
- ಅರ್ಜಿದಾರರು ಗರಿಷ್ಠ 35 ವರ್ಷಗಳ ವಯೋಮಿತಿಯಲ್ಲಿರಬೇಕು. ವಾರ್ಷಿಕ ವರಮಾನ ರೂ.3.50ಲಕ್ಷಗಳನ್ನು ಮೀರಿರಬಾರದು ಹಾಗೂ ಅರ್ಹತಾ ಪರೀಕ್ಷೆಗಳಲ್ಲಿ ಶೇ.60ಕಿಂತ ಹೆಚ್ಚಿನ ಅಂಕಗಳಿಸಿರಬೇಕು.

6. **ಗಂಗಾಕಲ್ಯಾಣ ಯೋಜನೆ:–**

**(ಅ) ವೈಯಕ್ತಿಕ ಕೊಳವೆಬಾವಿ ಯೋಜನೆ:–** ಪ್ರವರ್ಗ–1, 2ಎ, 3ಎ ಮತ್ತು 3ಬಿಗೆ ಸೇರಿದ ಸಣ್ಣ ಮತ್ತು ಅತಿ ಸಣ್ಣ ರೈತರ ಜಮೀನುಗಳಿಗೆ ಒಂದು ಕೊಳವೆ ಬಾವಿ ಕೊರೆಯಿಸಿ, ಪಂಪ್‌ಸೆಟ್ಟು, ಉಪಕರಣಗಳನ್ನು ಸರಬರಾಜು ಮಾಡಿ ವಿದ್ಯುತ್ ಸಂಪರ್ಕ ಕಲ್ಪಿಸಿ ನೀರಾವರಿ ಸೌಲಭ್ಯ ಒದಗಿಸಲಾಗುವುದು. ಘಟಕ ವೆಚ್ಚ ರೂ.2.50ಲಕ್ಷಗಳಲ್ಲಿ ರೂ.2.00ಲಕ್ಷಗಳ ಸಹಾಯಧನ ಹಾಗೂ ರೂ.50,000/–ಗಳ ಶೇ.4ರ ಬಡ್ಡಿದರದಲ್ಲಿ ಸಾಲ. ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಬೆಂಗಳೂರು ಗ್ರಾ॥, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ ಮತ್ತು ರಾಮನಗರ ಜಿಲ್ಲೆಗಳಲ್ಲಿ ಘಟಕ ವೆಚ್ಚ ರೂ.4.00ಲಕ್ಷಗಳು. ಈ ಮೊತ್ತದಲ್ಲಿ ವಿದ್ಯುದ್ದೀಕರಣಕ್ಕೆ ಪ್ರತಿ ಕೊಳವೆ ಬಾವಿಗೆ ರೂ.50,000/–ಗಳನ್ನು ವಿದ್ಯುತ್ ಸರಬರಾಜು ಕಂಪನಿಗೆ ಪಾವತಿಸಲಾಗುವುದು.

**(ಆ) ಸಾಮೂಹಿಕ ನೀರಾವರಿ ಯೋಜನೆ:–** ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 3ಎ, 3ಬಿಗೆ ಸೇರಿದ ಸಣ್ಣ ಮತ್ತು ಅತಿಸಣ್ಣ ರೈತರಾಗಿರಬೇಕು. ಕನಿಷ್ಠ 3 ಜನರು ಹೊಂದಿರುವ 8 ರಿಂದ 15 ಎಕರೆ ಜಮೀನಿಗೆ ರೂ.4.00ಲಕ್ಷಗಳ ವೆಚ್ಚದಲ್ಲಿ 02 ಕೊಳವೆ ಬಾವಿ, 15 ಎಕರೆಗಿಂತ ಹೆಚ್ಚಿನ ಜಮೀನಿಗೆ ರೂ.6.00ಲಕ್ಷಗಳ ವೆಚ್ಚದಲ್ಲಿ 03 ಕೊಳವೆಬಾವಿ ಕೊರೆಯಿಸಿ ಪಂಪ್ ಸೆಟ್ ಮತ್ತು ಉಪಕರಣಗಳನ್ನು ಸರಬರಾಜು ಮಾಡಿ ನೀರಾವರಿ ಸೌಲಭ್ಯ. ವಿದ್ಯುದ್ದೀಕರಣಕ್ಕೆ ಪ್ರತಿ ಕೊಳವೆ ಬಾವಿಗೆ ರೂ.50,000/–ಗಳನ್ನು ವಿದ್ಯುತ್ ಸರಬರಾಜು ಕಂಪನಿಗೆ ಪಾವತಿಸಲಾಗುವುದು.

- ಮಲೆನಾಡು ಪ್ರದೇಶಗಳಲ್ಲಿ ವೈಯಕ್ತಿಕ ಕೊಳವೆ ಬಾವಿ ಘಟಕ ವೆಚ್ಚದಲ್ಲಿ ತೆರೆದ ಬಾವಿಗಳ ಮಂಜೂರು.
- ಭೂ ಮಟ್ಟದಲ್ಲಿ ದೊರೆಯುವ ನದಿ ಮತ್ತು ಜಲಾಶಯಗಳ ನೀರಾವರಿ ಸಂಪನ್ಮೂಲಗಳಿಂದ ಏತ ನೀರಾವರಿ ಮೂಲಕ ನೀರಾವರಿ ಸೌಲಭ್ಯ.

ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವ ಹಿಂದುಳಿದ ವರ್ಗದ ಫಲಾಪೇಕ್ಷಿಗಳು, ಅವರು ವಾಸಿಸುತ್ತಿರುವ ಆಯಾ ಜಿಲ್ಲೆಯ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿ ಅಥವಾ ಆಯಾ ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿಸ್ತರಣಾಧಿಕಾರಿಗಳ ಕಛೇರಿಯಲ್ಲಿ ಉಚಿತ ಅರ್ಜಿಗಳನ್ನು ಪಡೆಯುವುದು. ಅಲ್ಲದೆ ನಿಗಮದ ವೆಬ್ ಸೈಟ್ www.karnataka.gov.in/dbcdc ಇಲ್ಲಿ ಪಡೆಯಬಹುದಾಗಿರುತ್ತದೆ. ***ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ/ದಾಖಲಾತಿಗಳೊಂದಿಗೆ ದಿನಾಂಕ:18/08/2018 ರೊಳಗೆ ಸಲ್ಲಿಸುವುದು.*** ದಿನಾಂಕ:18/08/2018ರ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್ ಸೈಟ್: www.karnataka.gov.in/dbcdc ಸಂಪರ್ಕಿಸಬಹುದು.

(ಡಾ॥ ಎಂ.ಆರ್.ಏಕಾಂತಪ್ಪ)
ವ್ಯವಸ್ಥಾಪಕ ನಿರ್ದೇಶಕರು.

ಪ್ರತಿಯನ್ನು:

1. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಸಲ್ಲಿಸಿದೆ.
2. ಮಾನ್ಯ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಅಧ್ಯಕ್ಷರು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರಿಗೆ ಸಲ್ಲಿಸಿದೆ.
3. ಅಧ್ಯಕ್ಷರು ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟ(ರಿ) ಶೇಷಾದ್ರಿಪುರಂ ಬೆಂಗಳೂರು–20 ಇವರಿಗೆ ಮಾಹಿತಿಗಾಗಿ.
4. ಎಲ್ಲಾ ಸಹಾಯಕ ಪ್ರಧಾನ ವ್ಯವಸ್ಥಾಪಕರು/ವಿಭಾಗೀಯ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರಿಗೆ ಮಾಹಿತಿಗೆ ಹಾಗೂ ಸೂಕ್ತ ಕ್ರಮಕ್ಕಾಗಿ.
5. ಎಲ್ಲಾ ಜಿಲ್ಲಾ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರಿಗೆ ಮಾಹಿತಿಗೆ ಹಾಗೂ ಸೂಕ್ತ ಕ್ರಮಕ್ಕಾಗಿ.
6. ನಿಗಮದ ಕೇಂದ್ರ ಕಛೇರಿ ಎಲ್ಲಾ ಅಧಿಕಾರಿ/ಸಿಬ್ಬಂದಿಯವರಿಗೆ ಮಾಹಿತಿಗಾಗಿ.
7. ಕಂಪ್ಯೂಟರ್ ಪ್ರೋಗ್ರಾಮರ್, ಕೇಂದ್ರ ಕಛೇರಿ ಇವರಿಗೆ ಮಾಹಿತಿಗಾಗಿ ಹಾಗೂ ನಿಗಮದ ವೆಬ್ ಸೈಟ್‌ನಲ್ಲಿ ಅಪ್‌ಲೋಡ್ ಮಾಡುವ ಸಲುವಾಗಿ.
8. ನಿಗಮದ ಸೂಚನಾ ಫಲಕಕ್ಕೆ